# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಶ್ರೀ ದಿನೇಶ್ ಗೂಳಿಗೌಡ, ಶ್ರೀ ಮಧು ಜಿ.ಮಾದೇಗೌಡ ರವರು ನಿಯಮ 72 ರ ಅಡಿಯಲ್ಲಿ ಮಂಡಿಸಿರುವ ಈ ಕೆಳಕಂಡ ಗಮನ ಸೆಳೆಯುವ ಸೂಚನೆಗೆ ಉತ್ತರ.**

ಪ್ರಶ್ನೆ:- ಮಂಡ್ಯ ಜಿಲ್ಲೆಯಲ್ಲಿ ಕಳೆದ ಬಾರಿ ಸುರಿದ ಭಾರಿ ಮಳೆಯಿಂದ ರಸ್ತೆಗಳು ತೀರಾ ಹದಗೆಟ್ಟಿದ್ದು, ಆಗಿಂದಾಗ್ಗೆ ಅಪಘಾತಗಳು ಸಂಭವಿಸುತ್ತಿರುತ್ತದೆ. ರಸ್ತೆ ಡಾಂಬರೀಕರಣ ಹಾಗೂ ಗುಂಡಿ ಮುಚ್ಚುವ ಕಾರ್ಯವನ್ನು ಇದುವರೆವಿಗೆ ಕೈಗೊಳ್ಳದೆ ಇರುವುದರಿಂದ ವಾಹನ ಸವಾರರಿಗೆ ಬಹಳ ತೊಂದರೆಯುಂಟಾಗಿದ್ದು, ಇತ್ತೀಚಿಗೆ ಯೋಧರೊಬ್ಬರು ಗುಂಡಿಗೆ ಬಿದ್ದು, ಮರಣ ಹೊಂದಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯಬಯಸುತ್ತೇವೆ.

ಸರ್ಕಾರದ ಉತ್ತರ:

ಮಂಡ್ಯ ಜಿಲ್ಲೆಯಾದ್ಯಂತ ಇತ್ತೀಚಿಗೆ ಸುರಿದ ಭಾರಿ ಮಳೆಯಿಂದ ರಸ್ತೆಗಳು ಹಾನಿಗೊಳಗಾಗಿದ್ದು, 2022-23ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 3054 ರಡಿ ಅತಿವೃಷ್ಟಿಯಿಂದ ಹಾನಿಗೊಳಗಾದ ರಸ್ತೆ ದುರಸ್ತಿ ಕಾಮಗಾರಿಗಳು ಹಾಗೂ ವಾರ್ಷಿಕ ನಿರ್ವಹಣೆ ಅಡಿ ಕೈಗೊಳ್ಳಲಾಗುತ್ತಿರುವ ರಸ್ತೆಗಳ ವಿವರ ಹಾಗೂ ಬಿಡುಗಡೆಯಾದ ಅನುದಾನದ ವಿವರಗಳು ಕೆಳಗಿನಂತಿವೆ.

- ಮಂಡ್ಯ ಜಿಲ್ಲೆಯಲ್ಲಿ ಕಳೆದ ಬಾರಿ ಸುರಿದ ಭಾರಿ ಮಳೆಯಿಂದ ಹಾನಿಗೊಳದಾದ ಜಿಲ್ಲಾ ಮುಖ್ಯ ರಸ್ತೆಗಳ ದುರಸ್ತಿಗಾಗಿ ಪ್ರವಾಹ ಪರಿಹಾರ ಅನುದಾನದಲ್ಲಿ ರೂ.203.40 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು, ಅದರಲ್ಲಿ 30 ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ. ಅವುಗಳ ಪೈಕಿ 6 ಕಾಮಗಾರಿ ಪೂರ್ಣಗೊಂಡಿದ್ದು, 9 ಕಾಮಗಾರಿಗಳು ಪ್ರಗತಿಯಲ್ಲಿವೆ. ಉಳಿದ 6 ಕಾಮಗಾರಿಗಳಿಗೆ ಗುತ್ತಿಗೆ ನಿಗಧಿಪಡಿಸುವ ಹಂತದಲ್ಲಿದ್ದು, ಬಾಕಿ 9 ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿವೆ.
- ರಾಜ್ಯ ಹೆದ್ದಾರಿಗಳ ದುರಸ್ತಿಗಾಗಿ ಒಟ್ಟಾರೆ ರೂ.166.00 ಲಕ್ಷ ಮೊತ್ತದ 9 ಕಾಮಗಾರಿಗಳು ಅನುಮೋದನೆಗೊಂಡಿರುತ್ತದೆ. ಈ ಪೈಕಿ 1 ಕಾಮಗಾರಿ ಪೂರ್ಣಗೊಂಡಿದ್ದು, 3 ಕಾಮಗಾರಿಗಳು ಪ್ರಗತಿಯಲ್ಲಿದೆ. ಬಾಕಿ 6 ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿವೆ.
- 2022-23ನೇ ಸಾಲಿನಲ್ಲಿ ಮಂಡ್ಯ ಜಿಲ್ಲಾಡಳಿತವು ಮಂಡ್ಯ ಜಿಲ್ಲೆಯಾದ್ಯಂತ ಇತ್ತೀಚಿಗೆ ಸುರಿದ ಭಾರಿ ಮಳೆಯಿಂದ ಹಾನಿಗೊಳಗಾದ ರಸ್ತೆ ದುರಸ್ತಿಗಾಗಿ ರಾಜ್ಯ ಹೆದ್ದಾರಿ ನಿರ್ವಹಣೆ ಅಡಿ ರೂ.22.30 ಲಕ್ಷ ಮೊತ್ತದ 07 ಕಾಮಗಾರಿಗಳು ಹಾಗೂ ಜಿಲ್ಲಾ ಮುಖ್ಯ ರಸ್ತೆ ನಿರ್ವಹಣೆ ಅಡಿ ರೂ.45.33 ಲಕ್ಷ ಮೊತ್ತದ ಒಟ್ಟಾರೆ 28 ಕಾಮಗಾರಿಗಳಿಗಾಗಿ ಅನುದಾನ ಬಿಡುಗಡೆ ಮಾಡಲಾಗಿದೆ.
- ಮಳೆಯಿಂದ ಹಾಳಾದ ರಸ್ತೆ ಕಾಮಗಾರಿಗಳನ್ನು ನಿಯಮಾನುಸಾರ ಕೈಗೆತ್ತಿಕೊಂಡು ನಿಗಧಿತ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು.

ಮುಂದುವರೆದು, 2022-23ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ-3054 ವಾರ್ಷಿಕ ನಿರ್ವಹಣೆ ಅಡಿ ಮಂಡ್ಯ ವಿಭಾಗ ವ್ಯಾಪ್ತಿಯಲ್ಲಿ ರಾಜ್ಯ ಹೆದ್ದಾರಿ ನಿರ್ವಹಣೆ ಅಡಿ ಒಟ್ಟಾರೆ 57 ಕಾಮಗಾರಿಗಳಿಗಾಗಿ ರೂ.480.02 ಲಕ್ಷ ಮೊತ್ತದ ಹಾಗೂ ಜಿಲ್ಲಾ ಮುಖ್ಯ ರಸ್ತೆ ನಿರ್ವಹಣೆ ಅಡಿ ಒಟ್ಟಾರೆ 190 ಕಾಮಗಾರಿಗಳಿಗಾಗಿ ರೂ.681.25 ಲಕ್ಷ ಮೊತ್ತದ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. ವಾರ್ಷಿಕ ನಿರ್ವಹಣೆ ಅಡಿ ಕೈಗೆತ್ತಿಕೊಂಡ ಎಲ್ಲಾ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಕಾಮಗಾರಿಗಳನ್ನು ನಿಗಧಿತ ಕಾಲಾಮಿತಿಯೊಳಗೆ ಪೂರ್ಣಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಕ್ರಮವಹಿಸಲಾಗುತ್ತಿದೆ.

ದಿನಾಂಕ:13-11-2022 ರಂದು ಶಿರಾ - ನಂಜನಗೂಡು ರಾಜ್ಯ ಹೆದ್ದಾರಿ-84ರಲ್ಲಿ ಸರಪಳಿ 170.15ರಲ್ಲಿ ಅಪಘಾತ ಉಂಟಾಗಿ ಸಾವು ಸಂಭವಿಸಿರುತ್ತದೆ. ಈ ಸ್ಥಳದ ರಾಜ್ಯ ಹೆದ್ದಾರಿಯ ಬೀರಗೋನಹಳ್ಳಿ-ಮಂಡ್ಯವರೆಗೆ (ಸರಪಳಿ: 147.08 ರಿಂದ 181.87) ಕೆಶಿಪ್ ಹಂತ-2ರಡಿ ಪ್ಯಾಕೇಜ್-ಎಇಪಿ3ಬಿ ಕೈಗೊಳ್ಳಲಾದ ಯೋಜನೆಯಲ್ಲಿ ಅನಿವಾರ್ಯ ಕಾರಣಗಳಿಂದ (de scope length) ಕೈಬಿಡಲಾಗಿದೆ. ಈ ಭಾಗದ ಹೆದ್ದಾರಿಯ ಅಭಿವೃದ್ಧಿಯನ್ನು ಪ್ರಸ್ತುತ ಲೋಕೋಪಯೋಗಿ ಇಲಾಖೆಯಿಂದ ಕೈಗೊಳ್ಳಲು ರೂ.1175.00 ಲಕ್ಷ ಮೊತ್ತದ ಅಂದಾಜು ಪಟ್ಟಿಗೆ ದಿನಾಂಕ: 04.08.2022ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸದರಿ ಕಾಮಗಾರಿಗೆ ಟೆಂಡರ್ ಆಹ್ವಾನಿಸಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಸದರಿ ಭಾಗದ ರಸ್ತೆಯನ್ನು ಸುಗಮ ವಾಹನ ಸಂಚಾರಕ್ಕಾಗಿ 2021-22 ನೇ ಸಾಲಿನಲ್ಲಿ ರೂ.4.50 ಲಕ್ಷಗಳ ಅನುದಾನದಲ್ಲಿ ನಿರ್ವಹಣೆ ಮಾಡಲಾಗಿರುತ್ತದೆ.

ಪ್ರಸಕ್ತ 2022-23ನೇ ಸಾಲಿನ ವಾರ್ಷಿಕ ನಿರ್ವಹಣಾ ಅಡಿಯಲ್ಲಿ ತಾತ್ಕಾಲಿಕವಾಗಿ ಗುಂಡಿಗಳನ್ನು ಮುಚ್ಚಲು ರೂ.5.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಈಗಾಗಲೇ ಗುಂಡಿ ಮುಚ್ಚುವ ಕಾಮಗಾರಿ ಪ್ರಗತಿಯಲ್ಲಿದ್ದು, ಪದೇ ಪದೇ ಬೀಳುತ್ತಿರುವ ಅಕಾಲಿಕ ಮಳೆಯ ಕಾರಣ ಗುಂಡಿ ಮುಚ್ಚುವ ಕಾಮಗಾರಿ ವಿಳಂಬವಾಗಿರುತ್ತದೆ. ಗುಂಡಿ ಮುಚ್ಚುವ ಕಾಮಗಾರಿಗಳನ್ನು ಶೀಘ್ರವೇ ಪೂರ್ಣಗೊಳಿಸಲಾಗುವುದು.

ಲೋಇ 135 ಸಿಕ್ಯೂಎನ್ 2022(ಇ)

(ಸಿ.ಸಿ.ಪಾಟೀಲ)
ಲೋಕೋಪಯೋಗಿ ಸಚಿವರು

C-75